ವಿಷಯ : ರಾಜಾಜಿನಗರಕ್ಕೆ ಸೇರಿದ ಬಸವೇಶ್ವರ ನಗರ 2ನೇ ಹಂತದಲ್ಲಿ ಸರ್ಕಾರಿ ಆಸ್ಪತ್ರೆಗೆ ಭೂ ಮಂಜೂರಾತಿ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 183 (442)

ಶ್ರೀ. ಕೆ. ಲಕ್ಕಣ್ಣ (ರಾಜಾಜಿನಗರ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜಾಜಿನಗರಕ್ಕೆ ಸೇರಿದ ಬಸವೇಶ್ವರ ನಗರ 2ನೇ ಹಂತದಲ್ಲಿ ಸಾಕಷ್ಟು ಸರ್ಕಾರಿ ಜಾಗವು ಈ ಸ್ಥಳವನ್ನು ಬೇರೆ ಯಾವುದಾದರೂ ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದೆಯೇ ?

ಆ) ಈ ಸ್ಥಳವನ್ನು ಆರೋಗ್ಯ ಇಲಾಖೆಗೆ ಕೊಡಲು ಉದ್ದೇಶಿಸಿರುವುದು ನಿಜವೇ ?

ಇ) ಈ ಸ್ಥಳದಲ್ಲಿ ಹೆರಿಗೆ ಮತ್ತು ಚಿಕಿತ್ಸಾ ಕೇಂದ್ರವನ್ನು ಕಟ್ಟಲು ಸರ್ಕಾರವು ಕ್ರಮ ಕೈಗೊಳ್ಳುವುದೇ, ಹಾಗಿದ್ದಲ್ಲಿ ಯಾವಾಗ ?

ಡಾ : ಎ. ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಈ ಇಲಾಖೆಯ ಗಮನಕ್ಕೆ ಬಂದಿಲ್ಲ.

ಆ) ಬೆಂಗಳೂರು ಮಹಾನಗರ ಪಾಲಿಕೆಯಿಂದ ಪ್ರಸ್ತಾವನೆ ಬಂದರೆ ಪರಿಶೀಲಿಸಲಾಗುವುದು.

ವಿಷಯ : ಮುಂಡರಗಿ, ಗದಗ್ ಹಾಗೂ ಶಿರಹಟ್ಟಿ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನಲ್ಲಿ ಫ್ಲೊರೋಸಿನ್ ಅಂಶವಿರುವ ಬಗ್ಗೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 184 (492)

ಶ್ರೀ ಕೆ. ಹೆಚ್. ಕುರಡಗಿ (ಮುಂಡರಗಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಂಡರಗಿ, ಗದಗ ಹಾಗೂ ಶಿರಹಟ್ಟಿ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನಲ್ಲಿ ಫ್ಲೊರೋಸಿಸ್ ಹೆಚ್ಚಿನಂಶ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ವಿಷಯದಲ್ಲಿ ಕೈಗೊಂಡ ಕ್ರಮಗಳೇನು?

ಎ.ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಹೌದು, ಬಂದಿದೆ.

ಆ) ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶವು ಅಗತ್ಯಕ್ಕಿಂತ ಹೆಚ್ಚು ಪ್ರಮಾಣಲ್ಲಿದ್ದರೆ ಫ್ಲೊರೋಸಿಸ್ ಎಂಬ ರೋಗವು ಮನುಷ್ಯನಿಗೆ ಬರುತ್ತದೆ. ಈ ಸಂಬಂಧದಲ್ಲಿ